**ದಿನಾಂಕಃ 02.07.2025 ರಂದು ಸಾಕ್ಷಿಯನ್ನು ಕರೆಯಿಸಿ ಪ್ರಮಾಣ ವಚನ ಬೋಧಿಸಲಾಯಿತು.**

ಮುಂದುವರಿದ ಪಾಟೀ ಸವಾಲು ಪ್ರತಿವಾದಿ ಪರ ಶ್ರೀ. ಎಲ್ ಎ. ವಕೀಲರಿಂದಃ-

ದಾವಾ ಆಸ್ತಿಯ ದಕ್ಷಿಣ ದಿಕ್ಕಿಗೆ 1 ನೇ ಪ್ರತಿವಾದಿ ರಾಕೇಶ್ ರವರಿಗೆ ಸೇರಿದ ಆಸ್ತಿ ಇದೆ ಎಂದರೆ ನಾನು ಖರೀದಿಸುವ ಕಾಲಕ್ಕೆ 2 ನೇ ಪ್ರತಿವಾದಿ ತಮ್ಮಯ್ಯರವರ ಆಸ್ತಿ ಇತ್ತು ಎನ್ನುತ್ತಾರೆ. ದಾವಾ ಆಸ್ತಿಯ ದಕ್ಷಿಣಕ್ಕೆ ಇರುವ ಆಸ್ತಿಯನ್ನು 2016 ನೇ ಇಸವಿಯಲ್ಲಿ 2 ನೇ ಪ್ರತಿವಾದಿ ತಮ್ಮಯ್ಯರವರಿಂದ 1 ನೇ ಪ್ರತಿವಾದಿ ರಾಕೇಶ್ ರವರು ಖರೀದಿಸಿದ್ದರು ಎಂದರೆ ಸಾಕ್ಷಿ ಖರೀದಿಸಿದ ಕಾಲಕ್ಕೆ ನನಗೆ ಗೊತ್ತಿಲ್ಲ, ಆ ನಂತರ ಗೊತ್ತಾಯಿತು ಎನ್ನುತ್ತಾರೆ. ನಾನು ದಾವಾ ಹೂಡುವ ಕಾಲಕ್ಕೆ ದಾವಾ ಆಸ್ತಿಯ ದಕ್ಷಿಣ ದಿಕ್ಕಿಗೆ ರಾಕೇಶ್ ರವರ ಆಸ್ತಿ ಎಂಬುದರ ಬದಲು 2 ನೇ ಪ್ರತಿವಾದಿ ತಮ್ಮಯ್ಯರವರ ಆಸ್ತಿ ಎಂದು ಬರೆಸಿರುತ್ತೇನೆ ಎಂದರೆ ಸರಿಯಲ್ಲ. 2 ನೇ ಪ್ರತಿವಾದಿಯಿಂದ ನಾನು ಮತ್ತು 1 ನೇ ಪ್ರತಿವಾದಿಯಿಂದ ಆಸ್ತಿಗಳನ್ನು ಖರೀದಿ ಮಾಡಿರುತ್ತೇವೆ ಎಂದರೆ ಸರಿಯಲ್ಲ. ದಾವಾ ಆಸ್ತಿಯ ದಕ್ಷಿಣ ದಿಕ್ಕಿಗೆ 1 ನೇ ಪ್ರತಿವಾದಿಗೆ ಸೇರಿದ ಆಸ್ತಿಯನ್ನು ಒತ್ತುವರಿ ಮಾಡಿ ನಾನು ಕಟ್ಟಡ ಕಟ್ಟುತ್ತಿದ್ದೇನೆ ಎಂದರೆ ಸರಿಯಲ್ಲ. ದಾವಾ ಆಸ್ತಿಯ ದಕ್ಷಿಣ ದಿಕ್ಕಿನಲ್ಲಿ 1 ನೇ ಪ್ರತಿವಾದಿಗೆ ಸೇರಿದ ಆಸ್ತಿ ಇದ್ದು ಅವರ ಆಸ್ತಿಯ ಸುತ್ತಲೂ ತಂತಿ ಬೇಲಿ ಹಾಕಿಸಿರುತ್ತಾರೆ ಎಂದರೆ ಸಾಕ್ಷಿ ನಾನು ತಂತಿ ಬೇಲಿ ಹಾಕಿಸಿರುತ್ತೇನೆ ಎನ್ನುತ್ತಾರೆ. ದಾವಾ ಆಸ್ತಿಯ ದಕ್ಷಿಣ ದಿಕ್ಕಿಗೆ ಇರುವ 1 ನೇ ಪ್ರತಿವಾದಿಗೆ ಸೇರಿದ ಆಸ್ತಿಯನ್ನು ನಾನು ಒತ್ತುವರಿ ಮಾಡಿರುತ್ತೇನೆ ಎಂದು ತಾಲ್ಲೂಕು ಭೂಮಾಪನ ಅಧಿಕಾರಿಗಳು ವರದಿ ಕೊಟ್ಟಿರುತ್ತಾರೆ ಎಂದರೆ ಸಾಕ್ಷಿ ನನಗೆ ಯಾವುದೇ ನೋಟೀಸು ಕೊಟ್ಟಿಲ್ಲ ಮತ್ತು ನನ್ನ ಸಮಕ್ಷಮ ಯಾವುದೇ ಮಹಜರು ಮಾಡಿಲ್ಲ ಎನ್ನುತ್ತಾರೆ.

1 ನೇ ಪ್ರತಿವಾದಿ ನನ್ನ ವಿರುದ್ಧ ಚನ್ನಪಟ್ಟಣ ಸಿವಿಲ್ ನ್ಯಾಯಾಲಯದಲ್ಲಿ ನಾನು ಅವರಿಗೆ ಸೇರಿದ ಆಸ್ತಿಯನ್ನು ಒತ್ತುವರಿ ಮಡಿರುತ್ತೇನೆ ಎಂದು ಚನ್ನಪಟ್ಟಣ ಪ್ರಧಾನ ಸಿವಿಲ್ ನ್ಯಾಯಾಲಯದಲ್ಲಿ ಅಸಲು ದಾವಾ ಸಂ ಃ 285/2019 ಎಂದು ದಾಖಲಾಗಿ ಅದರಲ್ಲಿ ನಾನು ನ್ಯಾಯಾಲಯಕ್ಕೆ ಹಾಜರಾಗುತ್ತಿದ್ದೇನೆ ಎಂದರೆ ಸರಿ. ನನ್ನ ಮುಖ್ಯ ವಿಚಾರಣಾ

ಪ್ರಮಾಣ ಪತ್ರದಲ್ಲಿ 1 ನೇ ಪ್ರತಿವಾದಿಯು ತಮ್ಮ ದಾವಾ ಸ್ವತ್ತಿಗೆ ಅತಿಕ್ರಮ ಪ್ರವೇಶ ಮಾಡಿ ತೊಂದರೆ ಕೊಟ್ಟಿರುತ್ತಾರೆ ಎಂದು ಹೇಳಿದ್ದು ಈ ಬಗ್ಗೆ ಪೋಲೀಸ್ ಪಿರ್ಯಾದು ಕೊಟ್ಟಿದ್ದೀರಾ ಎಂದರೆ ಸಾಕ್ಷಿ 1 ನೇ ಪ್ರತಿವಾದಿಯು ಪಿರ್ಯಾದು ಕೊಟ್ಟಿದ್ದರು ಮತ್ತು ನಾನು ಪಿರ್ಯಾದು ಕೊಟ್ಟಿದ್ದೆ ಎನ್ನುತ್ತಾರೆ. ತಾವು ಪಿರ್ಯಾದು ಕೊಟ್ಟಿದ್ದ ಬಗ್ಗೆ ನ್ಯಾಯಾಲಯಕ್ಕೆ ದಾಖಲೆಗಳನ್ನು ಹಾಜರು ಮಾಡಿಲ್ಲ ಎಂದರೆ ಸರಿ. 1 ನೇ ಪ್ರತಿವಾದಿಯೇ ನನ್ನ ವಿರುದ್ಧ ನಾನು ಅವರಿಗೆ ಸೇರಿದ ಆಸ್ತಿಯನ್ನು ಒತ್ತುವರಿ ಮಾಡಿಕೊಂಡಿರುತ್ತೇನೆ ಎಂದು ಪೋಲೀಸ್ ಪಿರ್ಯಾದು ಕೊಟ್ಟಿದ್ದರು ಎಂದರೆ ಸರಿ. ದಿ ಃ 15.06.2020 ರಂದು ಯಾವುದೇ ವ್ಯಾಜ್ಯ ಕಾರಣ ಉಂಟಾಗಿಲ್ಲ ಬದಲಾಗಿ ಸುಳ್ಳು ದಿನಾಂಕವನ್ನು ನಮೂದು ಮಾಡಿ ಪ್ರತಿವಾದಿಯರ ವಿರುದ್ಧ ಸುಳ್ಳು ದಾವೆ ಮಾಡಿರುತ್ತೇನೆ ಎಂದರೆ ಸರಿಯಲ್ಲ. ತಾವು ಎಷ್ಟು ವಿಸ್ತೀರ್ಣದಲ್ಲಿ ಮನೆ ಕಟ್ಟಿದ್ದೀರಿ ಮತ್ತು ಎಷ್ಟು ಖಾಲಿ ಜಾಗ ಇದೆ ಎಂದರೆ ಸಾಕ್ಷಿ ನಾನು ಅಳತೆ ಮಾಡಿ ನೋಡಿಲ್ಲ ಎನ್ನುತ್ತಾರೆ.

ನಾನು ಹಾಜರುಪಡಿಸಿರುವ ನಿಪಿ.6 ಕ್ರಯಪತ್ರ ದಾವಾ ಆಸ್ತಿಗೆ ಸಂಬಂಧಿಸಿದ ಕ್ರಯಪತ್ರ ಅಲ್ಲ ಎಂದರೆ ಸಾಕ್ಷಿಯು ತನಗೆ ಗೊತ್ತಿಲ್ಲ ಎನ್ನುತ್ತಾರೆ. ನಿಪಿ.7 ದಿಃ 12.05.1934 ರಲ್ಲಿ ಆದ ಕ್ರಯಪತ್ರದ ಬಗ್ಗೆ ಮಾಹಿತಿ ಇದೆಯಾ ಎಂದರೆ ಸಾಕ್ಷಿ ಮಾಹಿತಿ ಇಲ್ಲ ಎನ್ನುತ್ತಾರೆ.ನಾನು ಹಾಜರು ವಾಡಿರುವ ನಿಪಿ 6 ಮತ್ತು 7 ಕ್ರಯ ಪತ್ರಗಳ ಬಗ್ಗೆ  ನನ್ನ ದಾವಾ ಪತ್ರದಲ್ಲಾಗಲೀ  ನನ್ನ ಮುಖ್ಯ ವಿಚಾರಣಾ ಪ್ರಮಾಣ ಪತ್ರದಲ್ಲಿ ನಮೂದು ಮಾಡಿಲ್ಲ ಎಂದರೆ ನನಗೆ ಗೊತ್ತಿಲ್ಲ. 1 ನೇ ಪ್ರತಿವಾದಿಗೆ ಸೇರಿದ ಆಸ್ತಿಯನ್ನು ಒತ್ತುವರಿ ಮಾಡಿ ಅವರೇ ನನ್ನ ಆಸ್ತಿಯನ್ನು ಒತ್ತುವರಿ ಮಾಡಿರುತ್ತಾರೆಂದು ಸುಳ್ಳು ದಾವೆ ಸಲ್ಲಿಸಿ  ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.  ದಾವಾ ಆಸ್ತಿಗೆ ಸಂಬಂಧಪಟ್ಟಂತೆ 1 ನೇ ಪ್ರತಿವಾದಿ ನನಗೆ ಯಾವ ರೀತಿಯಲ್ಲೂ ತೊಂದರೆ ಕೊಟ್ಟಿಲ್ಲ ಎಂದರೆ ಸರಿಯಲ್ಲ. ದಾವೆ ಹೂಡಲು ಯಾವುದೇ ಸಕಾರಣ ಇಲ್ಲದಿದ್ದರೂ 1 ನೇ ಪ್ರತಿವಾದಿಯೇ ನನ್ನ ವಿರುದ್ಧ ಅಸಲು ದಾವಾ ಸಂಃ 285/2019 ರಂತೆ ದಾವೆ ಹೂಡಿದ್ದು ಅದರಿಂದ ತಪ್ಪಿಸಿಕೊಳ್ಳಲು ನಾನು ದಾವೆ ಮಾಡಿರುತ್ತೇನೆ ಎಂದರೆ ಸರಿಯಲ್ಲ. ಮಧ್ಯಂತರ ಅರ್ಜಿ ಆದೇಶವನ್ನು ಉಲ್ಲಂಘಿಸಿದ್ದರಿಂದ 1 ನೇ ಪ್ರತಿವಾದಿ ನನ್ನ ವಿರುದ್ಧ ಸಿಮಿಸ್ 12/2019 ರಂತೆ ದಾಖಲು ಮಾಡಿದ್ದು  ನಾನು

ಉದ್ದೇಶಪೂರ್ವಕವಾಗಿ ಹಾಜರಾಗುತ್ತಿಲ್ಲ ಎಂದರೆ ಸರಿಯಲ್ಲ. ನನ್ನ ತಮ್ಮ ಪೋಲೀಸ್ ಇಲಾಖೆಯಲ್ಲಿ ಇದ್ದು ಬೆಂಗಳೂರಿನಲ್ಲಿ ವಾಸ ಇರುತ್ತಾರೆ ಎಂದರೆ ಸರಿ.

**ಮರು ವಿಚಾರಣೆ ಃ ಇಲ್ಲ**

(ತೆರದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದಂತೆ ಗಣಕೀಕರಣ ಮಾಡಲಾಯಿತು.)

ಓ. ಹೇ. ಕೇ. ಸರಿ ಇದೆ.

ಅಪರ ಸಿವಿಲ್ ನ್ಯಾಯಾಧೀಶರು ಹಾಗೂ ಜೆಎಂಎಫ್‌ಸಿ
ನ್ಯಾಯಾಲಯ, ಚನ್ನಪಟ್ಟಣ